**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 2200/2022**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 9

ಸಾಕ್ಷಿದಾರರ ಹೆಸರು : ಕೃಷ್ಣಮೂರ್ತಿ

ತಂದೆಯ ಹೆಸರು: :ಗುರುಸಿದ್ದಪ್ಪ

ವಯಸ್ಸು : **43 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಬರಗೇನಹಳ್ಳಿ ಗ್ರಾಮ

**ದಿನಾಂಕ: 05-08-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಮೂರು ವರ್ಷಗಳ ಹಿಂದೆ ನಾನು ರಂಗೇನಹಳ್ಳಿ ಗ್ರಾಮದಲ್ಲಿ ಸಂಜೆ 4-00 ಗಂಟೆ ಸಮಯದಲ್ಲಿ ಅಪಘಾತವಾದ ವಿಚಾರವಾಗಿ ಪೊಲೀಸರು ಒಂದು ದಾಖಲಾತಿಗೆ ಸಹಿ ಮಾಡಿಸಿಕೊಂಡಿರುತ್ತಾರೆ. ನನ್ನ ಜೊತೆ ಚಾಸಾ-10 ರವರು ಸಹಿ ಮಾಡಿರುತ್ತಾರೆ. ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ತಿಳಿದಿರುತ್ತದೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-4 ರ ಛಾಯಚಿತ್ರದಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ** ಶ್ರೀ ಜೆ ಟಿ ಜೆ **ವಕೀಲರಿಂದ.**

ಮಹಜರ್ನಲ್ಲಿ ಬರೆದ ವಿಚಾರ ನನಗೆ ತಿಳಿದಿರುತ್ತದೆದ ಈಗ ಹೇಳಲು ನೆನಪಿಲ್ಲ. ಅಪಘಾತವುರಸ್ತೆಯ ಎಡ ಭಾಗದಲ್ಲಿ ಆಗಿರುತ್ತದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ಸಾಕ್ಷಿಯು ಮುಂದುವರಿದು ರಸ್ತೆಯ ಮಧ್ಯದಲ್ಲಿ ಆಗಿರುತ್ತದೆ ಎಂದು ನುಡಿದಿರುತ್ತಾರೆ. ನೀವು ರಂಗೇನಹಳ್ಳಿಯ ವಾಸಿ ಆಗಿರುವುದಿಲ್ಲ ಎಂದರೆ ಸರಿ. ನಿಮಗೆ ಯಾವುದೇ ವಿಚಾರ ತಿಳಿಯದೇ ಇದ್ದರೂ ಸಹ ಚಾಸಾ-1 ರವರಿಗೆ ಅನುಕೂಲ ಮಾಡಿಕೊಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ  ವಕೀಲರಿಂದ.</u>**

ಪಾಟೀ ಸವಾಲು ಇಲ್ಲ

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**